ನಿ.72 (5)

ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಪುಟ್ಟಣ್ಣ ರವರು ಮಂಡಿಸಿರುವ ನಿಯಮ 72 ರ ಸೂಚನಾ ಪತ್ರಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.

ವಿಷಯ: ಮಹಾನಗರ ಪಾಲಿಕೆಗಳು ಹಾಗೂ ನಗರ ಸಭೆಗಳ ಪಕ್ಕದಲ್ಲಿರುವ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಖಾಸಗಿ ಬಡಾವಣೆಗಳನ್ನು ನಿರ್ಮಾಣ ಮಾಡಿದ್ದು, ಸದರಿ ಬಡಾವಣೆಯ ನಿವೇಶನದಾರರು ಪಂಚಾಯತಿಯಿಂದ ನೀಡುವ ಎಲ್ಲಾ ನಾಗರೀಕ ಸೌಲಭ್ಯಗಳಾದ ರಸ್ತೆ, ನೀರು, ಬೀದಿ ದೀಪ ಸೇರಿದಂತೆ ಎಲ್ಲವನ್ನು ಪಡೆದುಕೊಳ್ಳುತ್ತಿದ್ದಾರೆ. ಆದರೆ ಈ ನಿವೇಶನದಾರರು ಮತ್ತು ಮನೆಗಳನ್ನು ಕಟ್ಟಿಕೊಂಡು ವಾಸ ಮಾಡುತ್ತಿರುವ ಮನೆಗಳನ್ನು ಪಂಚಾಯತಿಗೆ ಸೇರಿದ ಕಂದಾಯ ಪರಿಮಿತಿಯೊಳಗೆ ಸೇರಿಸಿಕೊಳ್ಳದೆ ಇರುವುದರಿಂದ ಗ್ರಾಮ ಪಂಚಾಯತಿಗೆ ಯಾವುದೇ ಆದಾಯ ಬರುತ್ತಿಲ್ಲ ಈ ಬಡಾವಣೆಗಳನ್ನು ಮಹಾನಗರ ಪಾಲಿಕೆ ಹಾಗೂ ನಗರಸಭೆ ವ್ಯಾಪ್ತಿಗೂ ಸೇರಿಸಿರುವುದಿಲ್ಲ. ಪಂಚಾಯತಿಯಿಂದ ಸೌಲಭ್ಯ ಪಡೆದುಕೊಳ್ಳುತ್ತಿರುವ ಇಂತಹ ಖಾಸಗಿ ಬಡಾವಣೆಗಳನ್ನು ಪಂಚಾಯತಿಯ ಕಂದಾಯ ವ್ಯಾಪ್ತಿಗೆ ಸೇರಿಸಿ ಕಂದಾಯ ಬಡಾವಣೆಗಳಿಂದ ಅಭಿವೃದ್ಧಿ ಶುಲ್ಕ ಹಾಗೂ ಕಂದಾಯವನ್ನು ಕಟ್ಟಿಸಿಕೊಳ್ಳಬೇಕೆಂಬ ಬಗ್ಗೆ.

----

ಉತ್ತರ: ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ಮತ್ತು ಕ್ರಮಬದ್ಧವಲ್ಲದ ಆಸ್ತಿಗಳಿಗೆ ಅಂದರೆ ದಿನಾಂಕ 14/06/2013ರ ಪೂರ್ವದಲ್ಲಿ ನೊಂದಣಿ/ಕ್ರಯವಾಗಿರುವ/ಅಸ್ತಿತ್ವದಲ್ಲಿರುವ ಆಸ್ತಿಗಳಿಂದ ತೆರಿಗೆಯನ್ನು ಗ್ರಾಮ ಪಂಚಾಯಿತಿಯಿಂದ ಸಂಗ್ರಹಿಸಲಾಗುತ್ತಿದೆ.

ದಿನಾಂಕ: 14/06/2013ರ ನಂತರ ಕ್ರಯ/ನೊಂದಣಿ/ಸೃಜಿಸಲಾದ ಆಸ್ತಿಗಳನ್ನು ಗ್ರಾಮ ಪಂಚಾಯಿತಿಯ ಕರನಿರ್ಧರಣಾ ಪಟ್ಟಿಯಲ್ಲಿ ತೆಗೆದುಕೊಳ್ಳಲು ಅವಕಾಶವಿರುವುದಿಲ್ಲ ಹಾಗೂ ಸದ್ಯಕ್ಕೆ ಪ್ರಾಯೋಗಿಕವಾಗಿ ಬೆಂಗಳೂರು ನಗರ ಜಿಲ್ಲೆಯಲ್ಲಿನ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ಆಸ್ತಿಗಳ ಡಿಜಿಟಲೀಕರಣ ಪ್ರಕ್ರಿಯೆ ಜಾರಿಯಲ್ಲಿದ್ದು, ದಿನಾಂಕ:14/06/2013ರ ನಂತರ ಕ್ರಯವಾಗಿರುವ/ನೊಂದಣಿ/ಅಸ್ತಿತ್ವದಲ್ಲಿರುವ ಆಸ್ತಿಗಳ ಸರ್ವೆ ಕಾರ್ಯ ಪ್ರಗತಿಯಲ್ಲಿದ್ದು, ತದನಂತರ ಇನ್ನುಳಿದ ಜಿಲ್ಲೆಗಳಲ್ಲಿ ಆಸ್ತಿಗಳ ಸರ್ವೆ ನಡೆಸಿ ಸದರಿ ಸ್ವತ್ತುಗಳನ್ನು ತೆರಿಗೆ ವ್ಯಾಪ್ತಿಗೆ ಒಳಪಡಿಸಲು ನಿಯಮಾನುಸಾರ ಕ್ರಮವಹಿಸಲಾಗುವುದು.

ಸಂಖ್ಯೆ: ಗ್ರಾಅಪ 403 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು